ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಸುಳ್ಳು ಜಾತಿ ಪ್ರಮಾಣ ಪತ್ರಗಳು

1937 (2583) ಶ್ರೀ ಎ.ಎಸ್.ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ತಾಂತ್ರಿಕ ಶಿಕ್ಷಣ ಇಲಾಖೆಗೆ ಒಳಪಡುವ ಇಂಜಿನಿಯರಿಂಗ್ (ಸರ್ಕಾರಿ ಮತ್ತು ಅನುದಾನಿತ) ಕಾಲೇಜುಗಳಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರ ಒದಗಿಸಿ ನೌಕರಿ ಪಡೆದ ಪ್ರಕರಣಗಳು ಏನಾದರೂ ಬೆಳಕಿಗೆ ಬಂದಿವೆಯೆ;

ಆ) ಬಂದಿದ್ದಲ್ಲಿ ಅವರುಗಳ ಬಗ್ಗೆ ಕೈಗೊಂಡ ಕ್ರಮಗಳೇನು? ಮತ್ತು ಅವರುಗಳನ್ನು ಕೆಲಸದಿಂದ ವಜಾ ಮಾಡಲಾಗಿದೆಯೇ?

ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು. ನಾಲ್ಕು ಪ್ರಕರಣಗಳು ಬೆಳಕಿಗೆ ಬಂದಿವೆ.

ಆ) ಸದರಿ ನಾಲ್ಕು ಪ್ರಕರಣಗಳಲ್ಲಿ ಒಂದು ಪ್ರಕರಣವು ಸಿಆರ್ಇ ಸೆಲ್‌ನಲ್ಲಿ ವಿಚಾರಣೆ ನಡೆಯುತ್ತಿದ್ದು ವಿಚಾರಣೆಯ ವರದಿ ಬಂದ ನಂತರ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಇನ್ನೆರಡು ಪ್ರಕರಣಗಳಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರವನ್ನು ಒದಗಿಸಿರುವುದು ಸಮಾಜ ಕಲ್ಯಾಣ ಇಲಾಖೆಯವರಿಂದ ರುಜುವಾತಾಗಿರುವುದರ ಮೇರೆಗೆ ಸಂಬಂಧಿಸಿದ ಆಡಳಿತ ಮಂಡಳಿಯವರಿಗೆ ಈ ಬಗ್ಗೆ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಆದೇಶಿಸಿದ್ದು, ಆದರಂತೆ, ಆಡಳಿತ ಮಂಡಳಿಯವರು ಸದರಿ ನೌಕರರಿಗೆ ಸೇವೆಯಿಂದ ವಜಾ ಮಾಡುವ ಬಗ್ಗೆ ಕಾರಣ ಕೇಳಿ ನೋಟೀಸ್ ನೀಡಿರುತ್ತಾರೆ. ಸದರಿ ಪ್ರತಿವಾದಿಗಳು ಈ ಬಗ್ಗೆ ಜಿಲ್ಲಾ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದಿದ್ದು, ಈ ಬಗ್ಗೆ ನ್ಯಾಯಾಲಯದ ಆದೇಶದ ಮೇರೆಗೆ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಮತ್ತೊಂದು ಪ್ರಕರಣವು ನೇಮಕಾತಿಯ ಪ್ರಾರಂಭಿಕ ಹಂತದಲ್ಲಿಯೇ ಬೆಳಕಿಗೆ ಬಂದಿದ್ದು, ಸಂಬಂಧಿಸಿದವರು ಈ ಬಗ್ಗೆ ನ್ಯಾಯಾಲಯಕ್ಕೆ ಮೊರೆ ಹೋಗಿರುವುದರಿಂದ ನ್ಯಾಯಾಲಯದ ತೀರ್ಪು ಬಂದ ನಂತರ ಆಡಳಿತ ಮಂಡಳಿಯವರು ಈ ಬಗ್ಗೆ ಕ್ರಮ ಕೈಗೊಳ್ಳಲಿದ್ದಾರೆ. ಸದರಿ ಪ್ರಕರಣದಲ್ಲಿ ನೇಮಕಾತಿಗೆ ಸರ್ಕಾರದ ಅನುಮೋದನೆಯನ್ನು ನೀಡಿರುವುದಿಲ್ಲ.

ವಿಶ್ವಬ್ಯಾಂಕ್ ಯೋಜನೆಯಿಂದ ತಾಂತ್ರಿಕ ಶಿಕ್ಷಣ ಇಲಾಖೆಗೆ ಅನುದಾನ

1938 (2584) ಶ್ರೀ ಎ.ಎಸ್.ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ವಿಶ್ವಬ್ಯಾಂಕ್ ಯೋಜನೆಯಿಂದ ಎಷ್ಟು ಕೋಟಿ ರೂ.ಗಳ ಅನುದಾನವನ್ನು ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆಗೆ ನೀಡಲಾಗಿದೆ ಮತ್ತು ಅದನ್ನು ಹೇಗೆ ಉಪಯೋಗಿಸಲಾಗಿದೆ;

ಆ) ಖರೀದಿಸಿರುವ ಯಂತ್ರೋಪಕರಣಗಳು (ಕಂಪ್ಯೂಟರ್ ಹಾರ್ಡ್‌ವೇರ್, ಸಾಫ್ಟ್‌ವೇರ್‌ಗಳು) ಇವುಗಳ ಉದ್ದಿಶ್ಯ ಹಾಗೂ ಗುಣಮಟ್ಟದ ಬಗ್ಗೆ;